ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 25 (170)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಉತ್ತರಿಸುವ ದಿನಾಂಕ : 22.09.2020

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕೊರೊನಾ ಹಿನ್ನೆಲೆಯಲ್ಲಿ ಚೀನಾದಿಂದ ಭಾರತದತ್ತ ಮುಖ ಮಾಡಿರುವ ಕೈಗಾರಿಕೆಗಳನ್ನು ರಾಜ್ಯದತ್ತ ಸೆಳೆಯಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು:	ಕೊರೊನಾ ಹಿನ್ನೆಲೆಯಲ್ಲಿ, ಕೈಗಾರಿಕೆಗಳನ್ನು ರಾಜ್ಯದತ್ತ ಸೆಳೆಯಲು ರಾಜ್ಯ ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ. 1. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ಕೋವಿಡ್ ನಂತರದ ಸಮಯದಲ್ಲಿ ಬಂಡವಾಳ ಆಕರ್ಷಿಸುವ ಸಂಬಂಧ ಶ್ರೀ ನಂದನ್ ನಿಲೇಕಣಿ, ಶ್ರೀಮತಿ ಕಿರಣ್ ಮಜುಂದರ್ ಷಾ ಹಾಗೂ ಶ್ರೀ ಕ್ರಿಸ್ ಗೋಪಾಲಕೃಷ್ಣ ರವರನ್ನೊಳಗೊಂಡ ಉನ್ನತ ಮಟ್ಟದ ಸಭೆಯನ್ನು ದಿನಾಂಕ: 05.05.2020 ರಂದು ನಡೆಸಲಾಗಿದೆ. 2. ರಾಜ್ಯದಲ್ಲಿ ಬಂಡವಾಳ ಆರ್ಕಷಿಸಲು ರಾಜ್ಯದ ಮುಖ್ಯಕಾರ್ಯದರ್ಶಿಗಳ ನೇತೃತ್ವದಲ್ಲಿ, ರಾಜ್ಯದ ಹಿರಿಯ ಅಧಿಕಾರಿಗಳು, ಟ್ರೇಡ್ / ಚೇಂಬರ್ ಆಫ್ ಕಾರ್ಮಸ್ ಅಂಡ್ ಇಂಡಸ್ಟ್ರೀಸ್ ಪ್ರತಿನಿಧಿಗಳು ಹಾಗೂ ಅಂತರರಾಷ್ಟ್ರೀಯ ಕಂಪನಿ ಪ್ರತಿನಿಧಿಗಳನ್ನೊಳಗೊಂಡ ವಿಶೇಷ ಕಾರ್ಯಪಡೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಸಿಐ/120/ಎಸ್‌ಪಿಐ/2020 ದಿ: 11/05/2020 ರಂತೆ ರಚಿಸಲಾಗಿದೆ. 3. ಬಂಡವಾಳ ಆಕರ್ಷಿಸಲು ರಾಜ್ಯ ಸರ್ಕಾರವು ಕೈಗಾರಿಕೆ ಸಂಘಗಳ / ಪ್ರಮುಖ ಕೈಗಾರಿಕೆಗಳ ಪ್ರತಿನಿಧಿಗಳೊಂದಿಗೆ, ಇನ್ವೆಸ್ಟ್ ಇಂಡಿಯಾ ಹಾಗೂ ಹಲವು ದೇಶಗಳ ರಾಯಭಾರಿಗಳೊಂದಿಗೆ ಸರಣಿ ಸಭೆಗಳನ್ನು ವೆಬಿನಾರ್ ಮುಖಾಂತರ ಆಯೋಜಿಸಲಾಗಿರುತ್ತದೆ. 4. ಹೊಸ ಬಂಡವಾಳವನ್ನು ಆಕರ್ಷಿಸಲು ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನೊಳಗೊಂಡ ನೂತನ ಕೈಗಾರಿಕಾ ನೀತಿ 2020–25ನ್ನು ದಿನಾಂಕ: 13/08/2020 ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿದೆ. 5. ಕರ್ನಾಟಕ ಕೈಗಾರಿಕೆಗಳ(ಸೌಲಭ್ಯ) (ತಿದ್ದುಪಡಿ) ಮಸೂದೆ 2020 ಹೊರಡಿಸಿದೆ. ಅದರನ್ವಯ, ಎಸ್.ಹೆಚ್.ಎಲ್.ಸಿ.ಸಿ. / ಎಸ್.ಎಲ್.ಎಸ್.ಡಬ್ಲ್ಯೂ.ಸಿ.ಸಿ. / ಡಿ.ಎಲ್.ಎಸ್.ಡಬ್ಲ್ಯೂ.ಸಿ.ಸಿ.ಯಿಂದ ಅನುಮೋದನೆ ಪಡೆದ ನಂತರ ಉತ್ಪಾದನಾ ಕೈಗಾರಿಕೆಗಳ ಸ್ಥಾಪನೆಗೆ ಅನುಕೂಲವಾಗುವಂತೆ, ಉದ್ಯಮಗಳಿಗೆ ಸ್ವೀಕೃತಿ ಪ್ರಮಾಣಪತ್ರಗಳನ್ನು ನೀಡಲಾಗುವುದು. ಈ ಪ್ರಮಾಣಪತ್ರವು ವಿವಿಧ ಕೆಳಹಂತದ ಇಲಾಖೆಗಳಿಂದ ಮೂರು ವರ್ಷಗಳ ಆರಂಭಿಕ ಅವಧಿಗೆ ಅಥವಾ ವಾಣಿಜ್ಯ

		ಕಾರ್ಯಾಚರಣೆಗಳು ಪ್ರಾರಂಭವಾದ ದಿನಾಂಕದಿಂದ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ. 6. ಕೈಗಾರಿಕೋದ್ಯಮಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲು ಕರ್ನಾಟಕ ಭೂಸುಧಾರಣೆ ಕಾಯ್ದೆ ಕಲಂ 109 ಗೆ ತಿದ್ದುಪಡಿ ತರಲಾಗಿದೆ. 7. ಕಾರ್ಮಿಕ ಕಾನೂನುಗಳನ್ನು ಸರಳೀಕರಣಗೊಳಿಸಲಾಗಿದೆ.
ಆ)	ಇದಕ್ಕಾಗಿ ವಿಶೇಷ ಕಾರ್ಯಪಡೆಯನ್ನು ರಚಿಸಲಾಗಿದೆಯೇ ಮತ್ತು ವಿಶೇಷ ಪ್ರೋತ್ಸಾಹಕ ತೀರ್ಮಾನಗಳನ್ನು ಘೋಷಿಸಿದೆಯೇ?	ಹೌದು. ದಿನಾಂಕ: 03.06.2020 ರಂದು ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಹೂಡಿಕೆ ಆಕರ್ಷಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ವಿಶೇಷ ಬಂಡವಾಳ ಉತ್ತೇಜನ ಕಾರ್ಯಪಡೆಯ ಸಭೆ ನಡೆಸಲಾಗಿದೆ. ಸದರಿ ಸಭೆಯಲ್ಲಿ ಬಂಡವಾಳ ಆಕರ್ಷಿಸಲು ಉಪ ಗ್ರೂಪ್‌ಗಳನ್ನು ರಚಿಸಲು ತೀರ್ಮಾನಿಸಲಾಗಿದ್ದು, ಸದರಿ ಗ್ರೂಪ್‌ಗಳು ಚೀನಾದಲ್ಲಿ ಕಾರ್ಯನಿರ್ವಹಿಸುತ್ತಿರುವ ವಲಯವಾರು ಕಂಪನಿಗಳೊಂದಿಗೆ ಸಭೆಗಳನ್ನು ನಡೆಸಿ ಕರ್ನಾಟಕದಲ್ಲಿ ಬಂಡವಾಳ ಹೂಡಲು ಇರುವ ಅವಕಾಶಗಳು, ಭೂಮಿ ಖರೀದಿ ಮತ್ತು ಕಾರ್ಮಿಕ ಕಾನೂನುಗಳನ್ನು ಸರಳೀಕರಣ ಗೊಳಿಸುತ್ತಿರುವುದನ್ನು ಮನವರಿಕೆ ಮಾಡಿಕೊಡಲಾಗುತ್ತಿದೆ. ಹೊಸ ಬಂಡವಾಳವನ್ನು ಆಕರ್ಷಿಸಲು ಹಾಗೂ ಆಕರ್ಷಕ ರಿಯಾಯಿತಿ ಹಾಗೂ ಪ್ರೋತ್ಸಾಹಗಳನ್ನೊಳಗೊಂಡ ನೂತನ ಕೈಗಾರಿಕಾ ನೀತಿ 2020-25ನ್ನು ದಿನಾಂಕ: 13/08/2020 ರಿಂದ ಅನ್ವಯವಾಗುವಂತೆ ಜಾರಿಗೆ ತರಲಾಗಿದೆ.

ಸಿಐ 234 ಎಸ್‌ಪಿಐ 2020

(ಜಗದೀಶ್ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು